ಅಂಬೇಡ್ಕರ್ ಸಮಗ್ರ ಗ್ರಾಮೀಣ ಅಭಿವೃದ್ಧಿ ಯೋಜನೆಗೆ ನೀಡಿದ ಹಣ

1617 (2248) : **ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ)** : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) "ಅಂಬೇಡ್ಕರ್ ಸಮಗ್ರ ಗ್ರಾಮೀಣ ಅಭಿವೃದ್ಧಿ ಯೋಜನೆ" ಗೆ 1999-2000ನೇ ಸಾಲಿಗೆ ಸರ್ಕಾರ ನೀಡಿದ ಹಣ ಎಷ್ಟು;

(ಆ) ಈ ಯೋಜನೆಯ ಸೌಲಭ್ಯ ಪಡೆದಿರುವ ಗ್ರಾಮಗಳು ಯಾವುವು;

(ಇ) ಈ ಗ್ರಾಮಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು; ಗ್ರಾಮವಾರು ಮಾಹಿತಿ ನೀಡುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

(ಅ) 1999-2000ನೇ ಸಾಲಿಗೆ ಅಂಬೇಡ್ಕರ್ ಸಮಗ್ರ ಗ್ರಾಮೀಣ ಅಭಿವೃದ್ಧಿ ಯೋಜನೆಯ ಅನುಷ್ಠಾನಕ್ಕಾಗಿ ರೂ. 440.57 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

(ಆ) ಗ್ರಾಮಗಳ ಆಯ್ಕೆ ಇನ್ನೂ ಅಪೂರ್ಣವಾಗಿರುವುದರಿಂದ, 2000-2001ನೇ ಸಾಲಿನಲ್ಲಿ ಈ ಯೋಜನೆಯನ್ನು ಕಾರ್ಯಗತಗೊಳಿಸಲಾಗುವುದು.

(ಇ) ಗ್ರಾಮಗಳ ಆಯ್ಕೆ ಪೂರ್ಣಗೊಂಡ ನಂತರ ಅಭಿವೃದ್ಧಿ ಕಾಮಗಾರಿಗಳನ್ನು 2000-2001ನೇ ಸಾಲಿನಿಂದ ಕೈಗೊಳ್ಳಲಾಗುವುದು.

ಕಾರ್ಕಳ ಪುರಸಭೆಯಲ್ಲಿನ ಒಳಚರಂಡಿ ವ್ಯವಸ್ಥೆ

1618 (2227) : **ಶ್ರೀ ಹೆಚ್. ಗೋಪಾಲ್ ಭಂಡಾರಿ (ಕಾರ್ಕಳ)** : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಕಾರ್ಕಳ ಪುರಸಭಾ ವ್ಯಾಪ್ತಿಯ ಒಳಚರಂಡಿ ವ್ಯವಸ್ಥೆ ಸರಿಯಾಗಿ ಕಾರ್ಯನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಒಳಚರಂಡಿ ವ್ಯವಸ್ಥೆಯ ಮ್ಯಾನ್‌ಹೋಲ್‌ಗಳು ಹಾಳಾಗಿದ್ದು ಅವುಗಳಿಂದ ಕೊಳಚೆ ನೀರು ಅಕ್ಕಪಕ್ಕದ ಬಾವಿಗಳಿಗೆ ಸೇರಿ ಬಾವಿಯ ನೀರು ಕಲುಷಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಅದನ್ನು ದುರಸ್ತಿ ಪಡಿಸಲು ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಬಿ. ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

(ಅ) ಹೌದು

(ಆ) ಹೌದು